# ಕುವೆಂಪು ವಿಶ್ವವಿದ್ಯಾನಿಲಯ

ಸಂಖ್ಯೆ:/ಕುವಿ/ಇಸಿಎ/**126**/2018-19

ವಿಶ್ವವಿದ್ಯಾಲಯ ಕಾರ್ಯಾಲಯ,
ಜ್ಞಾನ ಸಹ್ಯಾದ್ರಿ, ಶಂಕರಘಟ್ಟ- 577 451
ಶಿವಮೊಗ್ಗ ಜಿಲ್ಲೆ. ದಿನಾಂಕ : 13-08-2018

## <u>ಸುತ್ತೋಲೆ</u>

**ವಿಷಯ:** ದಿನಾಂಕ 20.08.2018ರ ಸೋಮವಾರ "ಸದ್ಭಾವನಾ ದಿನ"ವನ್ನಾಗಿ ಆಚರಿಸುವ ಬಗ್ಗೆ.

------

ಎಲ್ಲಾ ಧರ್ಮ, ಭಾಷೆ ಹಾಗೂ ರಾಜ್ಯಗಳ ಜನರಲ್ಲಿ ಸೌಹಾರ್ದತೆಯನ್ನು ಉತ್ತೇಜಿಸಿ ಎಲ್ಲರಲ್ಲೂ ಸದ್ಭಾವನೆಯನ್ನು ಮೂಡಿಸಿ ಹಿಂಸಾಚಾರವನ್ನು ತ್ಯಜಿಸುವಂತೆ ಮಾಡಲು ಕೇಂದ್ರ ಸರ್ಕಾರದ ಆದೇಶದಂತೆ, ರಾಜ್ಯ ಸರ್ಕಾರವು ಎಲ್ಲಾ ವಿಶ್ವವಿದ್ಯಾಲಯಗಳಲ್ಲಿ ಮಾಜಿ ಪ್ರಧಾನಮಂತ್ರಿ ದಿವಂಗತ ರಾಜೀವ್‌ಗಾಂಧಿಯವರ ಜನ್ಮವಾರ್ಷಿಕೋತ್ಸವವನ್ನು ದಿನಾಂಕ: 20.08.2018ರ ಸೋಮವಾರ **"ಸದ್ಭಾವನಾ ದಿನ"**ವನ್ನಾಗಿ ಆಚರಿಸುವಂತೆ ತಿಳಿಸಿದ್ದು, ತಾವೆಲ್ಲರೂ ಈ ದಿನದಂದು ಬೆಳಿಗ್ಗೆ 11.00 ಗಂಟೆಗೆ ತಮ್ಮ ವಿಭಾಗ/ಕಛೇರಿ/ಕಟ್ಟಡಗಳಲ್ಲಿ ಸದ್ಭಾವನಾ ದಿನಾಚರಣೆಯ ಪ್ರತಿಜ್ಞೆಯನ್ನು ಸ್ವೀಕರಿಸಬೇಕಾಗಿ ಈ ಮೂಲಕ ತಿಳಿಸಲಾಗಿದೆ. ವಿಶ್ವವಿದ್ಯಾಲಯದ ಆಡಳಿತ ಕಛೇರಿಯಲ್ಲಿ ಕೂಡ ಸದ್ಭಾವನಾ ದಿನಾಚರಣೆಯ ಪ್ರತಿಜ್ಞೆಯನ್ನು ಕುವೆಂಪು ಶತಮಾನೋತ್ಸವ ಭವನದಲ್ಲಿ ತೆಗೆದುಕೊಳ್ಳಲಾಗುವುದೆಂದು ಈ ಮೂಲಕ ತಿಳಿಸಲಾಗಿದೆ. ಸದ್ಭಾವನಾ ದಿನಾಚರಣೆಯ ಪ್ರತಿಜ್ಞಾ ವಿಧಿಯನ್ನು ಇದರೊಂದಿಗೆ ಲಗತ್ತಿಸಿದೆ.

ಕುಲಸಚಿವ

ಕುಲಸಚಿವ
ಕುವೆಂಪು ವಿಶ್ವವಿದ್ಯಾಲಯ,
ಜ್ಞಾನಸಹ್ಯಾದ್ರಿ, ಶಂಕರಘಟ್ಟ-577 451
ಶಿವಮೊಗ್ಗ ಜಿಲ್ಲೆ, ಕರ್ನಾಟಕ.

ಗೆ,

1) ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಮುಖ್ಯಸ್ಥರು, ಜ್ಞಾನಸಹ್ಯಾದ್ರಿ/ಸಹ್ಯಾದ್ರಿ ಕಾಲೇಜು ಆವರಣ/ಸ್ನಾ ಕೇಂದ್ರ, ಕಡೂರು ಮತ್ತು ಚಿಕ್ಕಮಗಳೂರು.
2) ಕುಲಸಚಿವರು (ಮೌಲ್ಯಮಾಪನ), ಕುವೆಂಪು ವಿಶ್ವವಿದ್ಯಾಲಯ, ಜ್ಞಾನಸಹ್ಯಾದ್ರಿ.
3) ಸಂಯೋಜನಾಧಿಕಾರಿಗಳು, ಐ.ಕ್ಯೂ.ಎ.ಸಿ, ಕುವೆಂಪು ವಿಶ್ವವಿದ್ಯಾಲಯ, ಜ್ಞಾನಸಹ್ಯಾದ್ರಿ.
4) ಗ್ರಂಥಪಾಲಕರು, ಕುವೆಂಪು ವಿಶ್ವವಿದ್ಯಾಲಯ, ಜ್ಞಾನಸಹ್ಯಾದ್ರಿ.
5) ನಿರ್ದೇಶಕರು, ದೂರಶಿಕ್ಷಣ ನಿರ್ದೇಶನಾಲಯ/ಕಾಲೇಜು ಅಭಿವೃದ್ಧಿ ಪರಿಷತ್ತು/ ದೈಹಿಕ ಶಿಕ್ಷಣ/ಪಿಎಂಇ ಮಂಡಳಿ/ಯುಸಿಸಿಎಫ್/ಮಹಿಳಾ ಅಧ್ಯಯನ ಕೇಂದ್ರ/ ಪ್ರಸಾರಾಂಗ/ಅಂಬೇಡ್ಕರ್ ಅಧ್ಯಯನ ಕೇಂದ್ರ/ಮ್ಯೂಸಿಯಂ, ಕುವೆಂಪು ವಿಶ್ವವಿದ್ಯಾಲಯ, ಜ್ಞಾನಸಹ್ಯಾದ್ರಿ.
6) ಕಾರ್ಯಪಾಲಕ ಅಭಿಯಂತರರು, ಕುವೆಂಪು ವಿಶ್ವವಿದ್ಯಾಲಯ, ಜ್ಞಾನಸಹ್ಯಾದ್ರಿ
7) ಸಂಚಾಲಕರು, ಪ.ಜಾ/ಪ.ಪಂ.ಅಭಿವೃದ್ಧಿ ಘಟಕ/ಓ.ಬಿ.ಸಿ.ಘಟಕ/ಯು.ಸಿ.ಸಿ.ಎಫ್./ಪಠ್ಯೇತರ ಚಟುವಟಿಕೆ ವಿಭಾಗ.
8) ವೈದ್ಯಾಧಿಕಾರಿಗಳು, ಆರೋಗ್ಯಕೇಂದ್ರ, ಕುವೆಂಪು ವಿಶ್ವವಿದ್ಯಾಲಯ, ಜ್ಞಾನಸಹ್ಯಾದ್ರಿ
9) ಎಲ್ಲಾ ಉಪಕುಲಸಚಿವರು/ಸಹಾಯಕ ಕುಲಸಚಿವರು ಮತ್ತು ಅಧೀಕ್ಷಕರು ಕುವೆಂಪು ವಿಶ್ವವಿದ್ಯಾಲಯ, ಜ್ಞಾನಸಹ್ಯಾದ್ರಿ
10) ಶಿಕ್ಷಕ ಸಲಹೆಗಾರರು, ಪುರುಷರ ಮತ್ತು ಮಹಿಳೆಯರ ಎಲ್ಲಾ ವಿದ್ಯಾರ್ಥಿನಿಲಯಗಳು.
11) ಉಪಮುಖ್ಯಸ್ಥರು, ಉದ್ಯೋಗ ಮಾಹಿತಿ ಮತ್ತು ಮಾರ್ಗದರ್ಶನ ಕೇಂದ್ರ, ಕುವೆಂಪು ವಿಶ್ವವಿದ್ಯಾಲಯ, ಜ್ಞಾನಸಹ್ಯಾದ್ರಿ.
12) ಸಂಯೋಜನಾಧಿಕಾರಿಗಳು, ರಾಷ್ಟ್ರೀಯ ಸೇವಾ ಯೋಜನೆ, ನಗರ ಕಛೇರಿ, ವಿದ್ಯಾನಗರ, ಶಿವಮೊಗ್ಗ

**ಪ್ರತಿಗಳು:**

01. ಮಾನ್ಯ ಕುಲಪತಿಯವರ ಆಪ್ತ ಕಾರ್ಯಾಲಯ, ಜ್ಞಾನಸಹ್ಯಾದ್ರಿ

## "ಸದ್ಭಾವನಾ ದಿನಾಚರಣೆಯ ಪ್ರತಿಜ್ಞೆ"

ಜಾತಿ, ಧರ್ಮ, ಪ್ರದೇಶ, ಮತ ಅಥವಾ ಭಾಷೆಯ ಬೇಧಭಾವವಿಲ್ಲದೇ ಭಾರತದ ಎಲ್ಲ ಜನತೆಯ ಭಾವೈಕ್ಯ ಮತ್ತು ಸೌಹಾರ್ದಕ್ಕಾಗಿ ಕಾರ್ಯ ನಿರ್ವಹಿಸುತ್ತೇನೆಂದು ನಾನು ಪ್ರತಿಜ್ಞೆ ಮಾಡುತ್ತೇನೆ. ಅಲ್ಲದೇ, ವೈಯಕ್ತಿಕವಾಗಿಯಾಗಲೀ ಅಥವಾ ಸಾಮೂಹಿಕವಾಗಿಯಾಗಲೀ ನಮ್ಮಲ್ಲಿರುವ ಎಲ್ಲ ಬೇಧಭಾವಗಳನ್ನು ಹಿಂಸಾಚಾರಕ್ಕೆ ಅವಕಾಶ ನೀಡದೆ ಸಮಾಲೋಚನೆ ಹಾಗೂ ಸಂವಿಧಾನಾತ್ಮಕ ಕ್ರಮಗಳ ಮೂಲಕ ಪರಿಹರಿಸುತ್ತೇನೆಂದು ಸಹ ಪ್ರತಿಜ್ಞೆ ಮಾಡುತ್ತೇನೆ.